# ಪೊಲೀಸ್ ಇಲಾಖೆ

# POLCET-2019

## (ISO: 9001-2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)

**ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ) (ಪುರುಷ & ಮಹಿಳಾ) & ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಬ್ಯಾಂಡ್ಸ್‌ಮೆನ್)(ಪುರುಷ) ಹುದ್ದೆಗಳ ನೇಮಕಾತಿ**

**ಅಧಿಸೂಚನೆ ಸಂಖ್ಯೆ:15/ನೇಮಕಾತಿ–4/2019–20.**

ವಿಷಯ: ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ & ಐಆರ್‌ಬಿ) (ಪುರುಷ &ಮಹಿಳಾ)–2420 &ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ) (ಬ್ಯಾಂಡ್ಸ್‌ಮೆನ್) (ಪುರುಷ)–252 ಹುದ್ದೆಗಳ ನೇರ ನೇಮಕಾತಿ ಕುರಿತು.

*~*~*~

1. ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಪುರುಷ & ಮಹಿಳಾ) (ಕೆ.ಎಸ್.ಆರ್.ಪಿ & ಐಆರ್‌ಬಿ) & ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ & ಐಆರ್‌ಬಿ) (ಬ್ಯಾಂಡ್ಸ್‌ಮೆನ್)(ಪುರುಷ) ಹುದ್ದೆಗಳಿಗೆ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 2009, ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ನೇಮಕಾತಿ ಮತ್ತು ಸೇವಾ ಷರತ್ತುಗಳು) (ತಿದ್ದುಪಡಿ) ನಿಯಮಗಳು, 2014 & 2020 ಮತ್ತು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013, ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013 ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗೂ ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಈ ಅಧಿಸೂಚನೆಯನ್ನು ಪ್ರಕಟಿಸುತ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ & ಐಆರ್‌ಬಿ) ಹಾಗೂ ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ & ಐಆರ್‌ಬಿ)(ಬ್ಯಾಂಡ್ಸ್‌ಮೆನ್) ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ಆನ್–ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸಿ ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.**

## ವಿಶೇಷ ಸೂಚನೆಗಳು:

*** ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕವು ಮುಕ್ತಾಯವಾದ ನಂತರ 10 ದಿನಗಳ ಕಾಲಾವಕಾಶ ನೀಡಲಾಗುತ್ತಿದ್ದು, ಸದರಿ ದಿನಾಂಕದೊಳಗಾಗಿ ಅಭ್ಯರ್ಥಿಯು ತಾನು ಸಲ್ಲಿಸಿರುವ ಅರ್ಜಿಯಲ್ಲಿ ಹೆಸರು, ಜನ್ಮ ದಿನಾಂಕ, ಕೋರಿರುವ ಮೀಸಲಾತಿ ಹಾಗೂ ಇತರೇ ಯಾವುದೇ ಅಂಶಗಳ ಬದಲಾವಣೆ ಮಾಡಬೇಕಾದಲ್ಲಿ ಖುದ್ದಾಗಿ / ಅಂಚೆ ಮೂಲಕ ಸಂಬಂಧಪಟ್ಟ ದೃಢೀಕೃತ ದಾಖಲೆಗಳೊಂದಿಗೆ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಗೆ ಸಲ್ಲಿಸತಕ್ಕದ್ದು. ನಿಗಧಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.**

*** ಅರ್ಹ ಅಭ್ಯರ್ಥಿಗಳು "ಅನುಬಂಧ–ಅ" ರಲ್ಲಿ ನೀಡಲಾಗಿರುವ ಖಾಲಿ ಹುದ್ದೆಗಳ ವರ್ಗೀಕರಣವನ್ನು ನೋಡಿ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿದೆ.**

**2. ಶುಲ್ಕ:**

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ₹.250/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ₹.100/– |

ನಿಗದಿತ ಶುಲ್ಕವನ್ನು ಹೆಚ್.ಡಿ.ಎಫ್.ಸಿ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಚೇರಿಯ ಅಧಿಕೃತ ಶಾಖೆಗಳಲ್ಲಿ ಬ್ಯಾಂಕಿನ / ಅಂಚೆ ಕಚೇರಿಯ ವೇಳೆಯಲ್ಲಿ ಚಲನ್ ನೀಡಿ ಶುಲ್ಕ ಪಾವತಿಸಬೇಕು.

**ಟಿಪ್ಪಣಿ:** ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ನಮೂದಿಸಿದಂತೆ ಅಭ್ಯರ್ಥಿಗೆ ಅನ್ವಯಿಸುವ ಶುಲ್ಕವನ್ನು **ನಗದು ರೂಪದಲ್ಲಿ ಮಾತ್ರ** ಮೇಲೆ ನಮೂದಿಸಿದ ಅಧಿಕೃತ ಬ್ಯಾಂಕಿನ ಶಾಖೆಗಳಲ್ಲಿ / ಅಂಚೆ ಕಚೇರಿಯಲ್ಲಿ ಪಾವತಿಸತಕ್ಕದ್ದು. (ಪಾವತಿಸುವ ವಿವರಗಳನ್ನು ಈ ಕೆಳಗಿನ ಪ್ಯಾರಾದಲ್ಲಿ ನೀಡಲಾಗಿದೆ). **ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

3. **ಆನ್-ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ :**

ಅರ್ಜಿದಾರ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಕೃತ ವೆಬ್‌ಸೈಟ್‌ನಲ್ಲಿರುವ ಮಾಹಿತಿಸೂಚಿ/ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿ ಮಾಡಬೇಕು. ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಇರುವ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ, ಸದರಿ ಅರ್ಜಿಯಲ್ಲಿನ ತಪ್ಪು ಮಾಹಿತಿಯನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ 8(ಬಿ)ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ (Soft Copy - less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ ಮತ್ತು ಇತ್ಯಾದಿ ವಿವರಗಳನ್ನು ಭರ್ತಿ ಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿದಾಗ ತ್ರಿಪತಿ (Triplicate) ಬ್ಯಾಂಕ್ ಚಲನ್ / ಅಂಚೆ ಕಚೇರಿ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ಆಯ್ಕೆ ಮಾಡಿರುವ ಘಟಕ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತವೆ. ಆ ಚಲನ್ ಪ್ರತಿಯನ್ನು ಮುದ್ರಿಸಿ/ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿಯೇ ಅಧಿಕೃತ ಹೆಚ್.ಡಿ.ಎಫ್.ಸಿ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಚೇರಿಯ ಶಾಖೆಗಳಲ್ಲಿ ಪಾವತಿಸಬೇಕು. ಶುಲ್ಕ ಪಾವತಿಸಿದ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದು.

ಅಭ್ಯರ್ಥಿಯು ಶುಲ್ಕ ಪಾವತಿಸಿದ ಮರುದಿನ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ My Application ನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರವೇ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ. ಸದರಿ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಅರ್ಜಿ ಪ್ರತಿ ಮತ್ತು ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

- **ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ:07.04.2020, ಬೆಳಿಗ್ಗೆ 10.00 ಗಂಟೆಯಿಂದ**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:06.05.2020, ಸಂಜೆ 06.00 ಗಂಟೆಯವರೆಗೆ**
- **ಅಧಿಕೃತ ಬ್ಯಾಂಕ್ ಶಾಖೆಗಳ / ಅಂಚೆ ಕಛೇರಿ ವೇಳೆಯಲ್ಲಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 08.05.2020.**

**ಸೂಚನೆ:**

a) ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಿ, ನಿಗದಿತ ದಿನಾಂಕದೊಳಗೆ ಸಲ್ಲಿಸಲಾಗುವ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.

b) ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 080-22943346 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಎದುರಾದಲ್ಲಿ ಅದನ್ನು ಸ್ಥಗಿತಗೊಳಿಸಿ ಮತ್ತೊಮ್ಮೆ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಲು ತಿಳಿಸಲಾಗಿದೆ.

**ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.**

| | |
|---|---|
| ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ & ಐಆರ್‌ಬಿ)(ಪುರುಷ) | 2398 |
| ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ)(ಮಹಿಳಾ) | 22 |
| ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ)(ಬ್ಯಾಂಡ್ಸ್‌ಮೆನ್) (ಸ್ಥಳೀಯ) | 32 |
| ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಆರ್‌ಪಿ & ಐಆರ್‌ಬಿ) (ಬ್ಯಾಂಡ್ಸ್‌ಮೆನ್) (ಪರಸ್ಥಳೀಯ) | 220 |

(ಮೇಲೆ ನಮೂದಿಸಿರುವ ಖಾಲಿ ಹುದ್ದೆಗಳ ವರ್ಗೀಕರಣಕ್ಕೆ ಅನುಬಂಧ–'ಅ' ಅನ್ನು ನೋಡಿ)

**4. ಅರ್ಹತಾ ಷರತ್ತುಗಳು :**

a) ಭಾರತೀಯ ನಾಗರಿಕನಾಗಿರತಕ್ಕದ್ದು.

b) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

c) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

**5. ವಯೋಮಿತಿ :**

a) **ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ & ಐಆರ್‌ಬಿ) ಹುದ್ದೆಗೆ.**

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 06.05.2020ಕ್ಕೆ ಅಭ್ಯರ್ಥಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

**ಸಾಮಾನ್ಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ:**

1. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 27 ವರ್ಷಗಳು.
2. ಇತರೆ ಅಭ್ಯರ್ಥಿಗಳಿಗೆ 25 ವರ್ಷಗಳು.
3. ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ & ಮಹಿಳಾ ಅಭ್ಯರ್ಥಿಗಳಿಗೆ 30 ವರ್ಷಗಳು.

b) **ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ&ಐಆರ್‌ಬಿ)(ಬ್ಯಾಂಡ್ಸ್‌ಮೆನ್) ಹುದ್ದೆಗೆ,**

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 06.05.2020ಕ್ಕೆ ಅಭ್ಯರ್ಥಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

**ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ:**

1. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 30 ವರ್ಷಗಳು.
2. ಇತರೆ ಅಭ್ಯರ್ಥಿಗಳಿಗೆ 25 ವರ್ಷಗಳು.
3. ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ & ಮಹಿಳಾ ಅಭ್ಯರ್ಥಿಗಳಿಗೆ 33 ವರ್ಷಗಳು.

**ಟಿಪ್ಪಣಿ:**

**"ಬುಡಕಟ್ಟು ಜನಾಂಗ"** ಎಂದರೆ "ಉತ್ತರ ಕನ್ನಡ ಕಾರವಾರ, ದಕ್ಷಿಣ ಕನ್ನಡ ಮಂಗಳೂರು, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ, ಕೊಡಗು, ಚಾಮರಾಜನಗರ ಮತ್ತು ಮೈಸೂರು ಅರಣ್ಯಗಳಲ್ಲಿ ಸಿದ್ದಿಗರು, ಜೇನುಕುರುಬ, ಕಾಡುಕುರುಬ, ಯೆರವ, ಸೋಲಿಗ, ಕುಡಿಯ, ಗೌಡ್ಲು, ಹಸಲರು, ಮಲೈಕುಡಿಯ ಮತ್ತು ಕೊರಗ ಬುಡಕಟ್ಟು ಸಮುದಾಯಗಳಿಗೆ ಸೇರಿದ ಅಭ್ಯರ್ಥಿಗಳು".

**ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ & ಐಆರ್‌ಬಿ) ಹುದ್ದೆಗೆ.**

**a) ಮಾಜಿ ಸೈನಿಕ ಅಭ್ಯರ್ಥಿಗಳಿಗೆ :**

ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ" ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

**b) ಮಾಜಿ ಸೈನಿಕರ ಬಗ್ಗೆ ವಿವರಣೆ (ವಿಶೇಷ ಮೀಸಲು ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ & ಐಆರ್‌ಬಿ) :**

ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ